**Akashvani : Bangalore**
**Regional Bulletin In Kannada**
**27.09.2024 / 18.40 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**27.09.2024 / 18.40 hrs**
**<><*<><>*><>**

<u>ಮುಖ್ಯಾಂಶಗಳು</u>

೧. ಮೂಡಾ ನಿವೇಶನ ಪ್ರಕರಣ: ಮುಖ್ಯಮಂತ್ರಿ ವಿರುದ್ಧ ಲೋಕಾಯುಕ್ತ ಪೊಲೀಸರಿಂದ ಎಫ್ಐಆರ್ ದಾಖಲು

೨. ಲಕ್ಕುಂಡಿ ಸ್ಮಾರಕಗಳನ್ನು ವಿಶ್ವ ಪರಂಪರೆ ಪಟ್ಟಿಗೆ ಸೇರಿಸುವಂತೆ ರಾಜ್ಯ ಸರಕಾರದಿಂದ ಶೀಘ್ರ ಯುನೆಸ್ಕೋಗೆ ಪ್ರಸ್ತಾವನೆ

೩. ತುಮಕೂರು - ಅರಸೀಕೆರೆ ರೈಲ್ವೆ ಚತುಷ್ಪಥ ಮಾರ್ಗದ ಅಭಿವೃದ್ಧಿಗೆ ಕೇಂದ್ರದ ಅನುಮೋದನೆ

೪. ರಾಜ್ಯಕ್ಕೆ ೫೦೦ ಹೊಸ ಜಾಗತಿಕ ಸಾಮರ್ಥ್ಯ ಕೇಂದ್ರಗಳನ್ನು ಆಕರ್ಷಿಸುವ ಗುರಿ - ಸಚಿವ ಪ್ರಿಯಾಂಕ ಖರ್ಗೆ

**<><*<><>*><>**

ಮೈಸೂರಿನ ಮೂಡಾದಿಂದ ನಿಯಮ ಬಾಹಿರವಾಗಿ ನಿವೇಶನ ಪಡೆದ ಆರೋಪದ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಲೋಕಾಯುಕ್ತ ಪೊಲೀಸರು ಎಫ್ಐಆರ್ ದಾಖಲಿಸಿದ್ದಾರೆ. ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣಾ ನೀಡಿದ ದೂರಿನ ವಿಚಾರಣೆ ನಡೆಸಿದ ಜನಪ್ರತಿನಿಧಿಗಳ ನ್ಯಾಯಾಲಯ ಮುಖ್ಯಮಂತ್ರಿ ವಿರುದ್ಧ ಎಫ್ಐಆರ್ ದಾಖಲಿಸಿ ತನಿಖೆ ಕೈಗೊಳ್ಳುವಂತೆ ಲೋಕಾಯುಕ್ತ ಪೊಲೀಸರಿಗೆ ಸೂಚನೆ ನೀಡಿತ್ತು.

**<><*<><>*><>**

ಸರ್ಕಾರಿ ಯೋಜನೆಗಳು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ಅಧಿಕಾರಿಗಳ ಹೊಣೆಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಅಂಗನವಾಡಿಗಳಿಗೆ ಸೂಕ್ತ ಮತ್ತು ಗುಣಮಟ್ಟದ ಆಹಾರ ತಲುಪುತ್ತಿದೆಯೇ ಎಂಬುದನ್ನು ಅಧಿಕಾರಿಗಳು ಕಾಲಕಾಲಕ್ಕೆ ತಪಾಸಣೆ ಮಾಡಿ ಖಚಿತಪಡಿಸಿಕೊಳ್ಳಬೇಕು ಮತ್ತು ಮಹಿಳೆಯರು ಮತ್ತು ಮಕ್ಕಳಲ್ಲಿ ಅಪೌಷ್ಠಿಕತೆ ನಿವಾರಿಸಲು ಕ್ರಮ ಕೈಗೊಳ್ಳಬೇಕು ಎಂದರು. ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಅಧಿಕಾರಿಗಳು ಕಟ್ಟೆಚ್ಚರ ವಹಿಸಬೇಕು ಎಂದು ಹೇಳಿದರು.

**<><*<><>*><>**

ಗದಗ ಜಿಲ್ಲೆಯ ಲಕ್ಕುಂಡಿ ಗ್ರಾಮದಲ್ಲಿರುವ ಸ್ಮಾರಕಗಳನ್ನು ವಿಶ್ವ ಪಾರಂಪರಿಕ ಪಟ್ಟಿಗೆ ಸೇರಿಸುವಂತೆ ರಾಜ್ಯ ಸರಕಾರ ಯುನೆಸ್ಕೋಗೆ ಪ್ರಸ್ತಾವನೆ ಸಲ್ಲಿಸಲಿದೆ ಎಂದು ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ್ ತಿಳಿಸಿದ್ದಾರೆ. ಗದಗದ ಐತಿಹಾಸಿಕ ಪ್ರಸಿದ್ಧ ಶ್ರೀ ವೀರ ನಾರಾಯಣದೇವಸ್ಥಾನದಲ್ಲಿ ಗದಗ ಜಿಲ್ಲಾಡಳಿತದಿಂದ ಜರುಗಿದ ವಿಶ್ವ ಪ್ರವಾಸೋದ್ಯಮ ದಿನಾಚರಣೆಗೆ ಚಾಲನೆ ನೀಡಿ ಸಚಿವ ಪಾಟೀಲ ಮಾತನಾಡಿದರು. ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ರಾಜ್ಯ ಸರ್ಕಾರ ಹೊಸ ಪ್ರವಾಸೋದ್ಯಮ ನೀತಿ ಜಾರಿಗೊಳಿಸಲು ಬದ್ಧವಾಗಿದೆ ಎಂದರು.

**-ಧ್ವನಿ- ಹೆಚ್.ಕೆ.ಪಾಟೀಲ್**

ರೋಣ ಶಾಸಕ ಜಿ ಎಸ್ ಪಾಟೀಲ, ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಕಾಲೇಜು ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರವಾಸಿ ತಾಣಗಳಲ್ಲಿ ಚಾರಣಕ್ಕೆ ಅನುಕೂಲಕರ ವಾತಾವರಣ ಕಲ್ಪಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಣಾಧಿಕಾರಿ ಡಾ: ಅನುರಾಧಾ ಹೇಳಿದ್ದಾರೆ.ಬೆಳಗಾವಿಯಲ್ಲಿಂದು ಸಾರ್ವಜನಿಕ ಜಾಗೃತಿ ಜಾತಾ ನಡೆಸಲಾಯಿತು. ಪ್ರವಾಸೋದ್ಯಮ ಮತ್ತು ಸ್ಥಳೀಯ ಉದ್ಯಮದ ಬೆಳವಣಿಗೆಗೆ ಸರ್ಕಾರ ವಿಶೇಷ ಆದ್ಯತೆ ನೀಡುತ್ತಿದೆ ಎಂದು ಪ್ರವಾಸೋದ್ಯಮ ಇಲಾಖೆಯ ಜಂಟಿ ನಿರ್ದೇಶಕಿ ಸೌಮ್ಯಾ ಪಾಪಟ ತಿಳಿಸಿದ್ದಾರೆ.

<><*<><>*><>

ಕಾಫಿ ನಾಡು ಚಿಕ್ಕವಗಳೂರು ಜಿಲ್ಲೆ ಪ್ರವಾಸಿಗರ ಸ್ವರ್ಗವಾಗಿದೆ ಎಂದು ಶಾಸಕ ಹೆಚ್.ಡಿ ತಮ್ಮಯ್ಯ ತಿಳಿಸಿದ್ದಾರೆ. ಜಿಲ್ಲೆಯ ಮುಳ್ಳಯ್ಯನಗಿರಿ ಬೆಟ್ಟ, ಭದ್ರಾ ಅಭಯಾರಣ್ಯ, ಕೆಮ್ಮಣ್ಣುಗುಂಡಿ, ಕುದುರೆಮುಖ ಗಿರಿ ಪರ್ವತ ಶ್ರೇಣಿಗಳು, ಜಿಲ್ಲೆಯಲ್ಲಿನ ಜಲಪಾತಗಳು ಹೀಗೆ ಸಾಕಷ್ಟು ಅಕರ್ಷಿಣೆಯ ತಾಣಗಳಿವೆ ಎಂದರು.

<><*<><>*><>

ಸಿಬಿಐಗೆ ನೀಡಿದ್ದ ಮುಕ್ತ ಅನುಮತಿ ಅಧಿಕಾರವನ್ನು ರಾಜ್ಯ ಸರ್ಕಾರ ಹಿಂದಕ್ಕೆ ಪಡೆದ ಕ್ರಮವನ್ನು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಸಮರ್ಥಿಸಿಕೊಂಡಿದ್ದಾರೆ.  ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದ್ವೇಷದ ರಾಜಕಾರಣಕ್ಕೆ ಅವಕಾಶವಾಗಬಾರದು ಎಂಬ ಕಾರಣಕ್ಕಾಗಿ ಅನುಮತಿಯನ್ನು ಹಿಂಪಡೆಯಲಾಗಿದೆ ಎಂದರು.

<><*<><>*><>

ಬೆಂಗಳೂರಿನ ಉಪನಗರಿ ರೈಲ್ವೆ ಯೋಜನೆಯನ್ನು ೨೦೨೫ರ ವೇಳೆಗೆ ಪೂರ್ಣಗೊಳಿಸಲಾಗುವುದು ಎಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದ್ದಾರೆ. ತುಮಕೂರಿನಲ್ಲಿ ಮಾತನಾಡಿದ ಅವರು, ೨೨೦ ಕೋಟಿ ವೆಚ್ಚದಲ್ಲಿ ಬೆಂಗಳೂರು -ಅರಸೀಕೆರೆ ಮಾರ್ಗದ ಸಿಗ್ನಲ್ ವ್ಯವಸ್ಥೆಯನ್ನು ಉತ್ತಮ ಪಡಿಸಲಾಗುವುದು. ಇದರಿಂದ ಮುಂದಿನ ದಿನಗಳಲ್ಲಿ ರೈಲ್ವೆ ಸಂಚಾರ ಸರಾಗವಾಗಲಿದೆ ಮತ್ತು ಪ್ರಯಾಣಿಕರಿಗೆ ಹೆಚ್ಚಿನ ಅನುಕೂಲ ದೊರಕಲಿದೆ ಎಂದರು. ತುಮಕೂರು ಅರಸೀಕೆರೆ ರೈಲ್ವೆ ಮಾರ್ಗವನ್ನು ಚತುಷ್ಪದ ಮಾರ್ಗವನ್ನಾಗಿ ಮಾಡುವ ಯೋಜನೆಗೆ ಕೇಂದ್ರ ಅನುಮೋದನೆ ನೀಡಿದೆ. ಪ್ರಯಾಣಿಕರ ಬೇಡಿಕೆಯಂತೆ ತುಮಕೂರು-ಯಶವಂತಪುರ ನಡುವೆ ಮೆಮು ರೈಲು ಸಂಚಾರಕ್ಕೆ ಚಾಲನೆ ನೀಡಲಾಗಿದೆ.  ಬೆಂಗಳೂರಿನ ವರ್ತುಲ ರೈಲ್ವೆ ಯೋಜನೆಗೆ ೮೦ ಸಾವಿರ ಕೋಟಿ ರೂಪಾಯಿ ಅನುದಾನ ಬಿಡುಗಡೆಯಾಗಿದೆ ಎಂದು ಸಚಿವ ಸೋಮಣ್ಣ ತಿಳಿಸಿದರು.

<><*<><>*><>

ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಸ್ವಚ್ಛತಾ ಹಿ ಸೇವಾ ಅಭಿಯಾನ ಯಶಸ್ವಿಯಾಗಿ ಸಾಗುತ್ತಿದೆ.  ಸ್ವಚ್ಛತೆ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ವಿಜಯಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆಯ ಪರಿಕರ ಅಭಿಯಂತರರ ಅಶೋಕ್ ಕುಮಾರ್ ಸಜ್ಜನ್ ಮಾತನಾಡಿ ಇದೇ ೧೪ ರಿಂದ ಮುಂದಿನ ತಿಂಗಳ ೨ರವರೆಗೆ ಸ್ವಚ್ಛತಾ ಹಿ ಸೇವಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

**-ಧ್ವನಿ- ಅಶೋಕ್ ಕುಮಾರ್ ಸಜ್ಜನ್**

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಎಲ್ಲಾ ಅಧಿಕಾರಿಗಳು, ಸಂಘ ಸಂಸ್ಥೆಗಳು, ಸಾರ್ವಜನಿಕರು ದೇವನಹಳ್ಳಿ ತಾಲೂಕಿನ ಆವತಿ ಬೆಟ್ಟದಲ್ಲಿ ಪ್ಲಾಸ್ಟಿಕ್ ವಸ್ತುಗಳು, ಕಸ ತ್ಯಾಜವನ್ನು ಸಂಗ್ರಹಿಸಿ ಸ್ವಚ್ಛತಾ ಕಾರ್ಯವನ್ನು ಪಾಲ್ಗೊಂಡು ಪ್ರತಿಜ್ಞೆ ಸ್ವೀಕರಿಸಿದರು. ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆ ಆಯುಕ್ತ ಆಶಾದ್ ಷರೀಫ್ ಮಾತನಾಡಿ ಕೇಂದ್ರ ಸರ್ಕಾರದ ನಿರ್ದೇಶನದ ಮೇರೆಗೆ ಇದೇ ೧೭ ರಿಂದ ದೇಶಾದ್ಯಂತ ಸ್ವಚ್ಛತಾ ಹೀ ಸೇವಾ ಅಭಿಯಾನ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಮೈಸೂರು ನಗರ ಪಾಲಿಕೆ ಇದಕ್ಕೆ ಕೈಜೋಡಿಸಿದ್ದು, ಸ್ವಚ್ಛತೆ ಬಗ್ಗೆ ಸಿಬ್ಬಂದಿಗೆ ಅರಿವು ಮೂಡಿಸಲಾಗುತ್ತಿದೆ ಎಂದರು. ಗದಗ - ಬೆಟಗೇರಿ ಅವಳಿ ನಗರಗಳಲ್ಲಿ ಅಭಿಯಾನ ಯಶಸ್ವಿಯಾಗಿ ಜರುಗುತ್ತಿದೆ. ಐತಿಹಾಸಿಕ ತ್ರಿಕೋಟೇಶ್ವರ ದೇವಸ್ಥಾನ, ಭೀಷ್ಮಕೆರೆ ಸ್ವಚ್ಛತೆ ಹಾಗೂ ಬೀದಿ ವ್ಯಾಪಾರಿಗಳಿಗಾಗಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಎಂದು ಗದಗ -ಬೆಟಗೇರಿ ನಗರ ಸಭೆಯ ಸಹಾಯಕ ಕಾರ್ಯಪಾಲಕ ಅಭಿಯಂತರ ಆನಂದ್ ಬದಿ ತಿಳಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ೨೦೨೯ರ ವೇಳೆಗೆ ೫೦೦ ಹೊಸ ಜಾಗತಿಕ ಸಾಮರ್ಥ್ಯ ಕೇಂದ್ರಗಳನ್ನು ಆಕರ್ಷಿಸುವ ಗುರಿ ಹೊಂದಲಾಗಿದೆ ಎಂದು ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ.  ಬೆಂಗಳೂರಿನಲ್ಲಿಂದು ೨೦೨೪ ಹಾಗೂ ೨೦೨೯ ಜಿಸಿಸಿ ನೀತಿಯನ್ನು ಬಿಡುಗಡೆ ಮಾಡಿ ಅವರು ಮಾತನಾಡಿದರು.  ಇದರಿಂದಾಗಿ ೩ ಲಕ್ಷದ ೫೦ ಸಾವಿರ ಉದ್ಯೋಗಗಳನ್ನು ಸೃಷ್ಟಿಸಲಾಗುವುದು ಮತ್ತು ಆರ್ಥಿಕ ಉತ್ಪಾದನೆಯಲ್ಲಿ ೫೦ ಬಿಲಿಯನ್ ಡಾಲರ್ ಗುರಿ ತಲುಪಲಾಗುವುದು. ಜಿಸಿಸಿಯಲ್ಲಿ ಸುಮಾರು ೫ ಲಕ್ಷದ ೭೦ ಸಾವಿರ ವೃತ್ತಿಪರರು ಉದ್ಯೋಗದಲ್ಲಿದ್ದಾರೆ.  ದೇಶದಲ್ಲಿ ಬೆಂಗಳೂರು ಶೇಕಡ ೩೯ರಷ್ಟು ಮಾರುಕಟ್ಟೆ ಪಾಲುದಾರಿಕೆಯನ್ನು ಹೊಂದಿದೆ ಎಂದು ಸಚಿವರು ತಿಳಿಸಿದರು.

<><*<><>*><>

ಭಾರತ ಭವಿಷ್ಯದಲ್ಲಿ ಗ್ಲೋಬಲ್ ಸೂಪರ್ ಪವರ್ ರಾಷ್ಟ್ರ ಆಗಬೇಕಾದರೆ ಮಾನವ ಸಂಪನ್ಮೂಲ ಸಮರ್ಪಕವಾಗಿ ಬಳಕೆಯಾಗಬೇಕು ಎಂದು ಆಂಧ್ರಪ್ರದೇಶದ ರಾಜ್ಯಪಾಲ, ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಾಧೀಶ ಅಬ್ದುಲ್ ನಝೀರ್ ಅಭಿಪ್ರಾಯಪಟ್ಟಿದ್ದಾರೆ. ಮಂಗಳೂರಿನಲ್ಲಿ ಜರುಗಿದ ಎರಡು ದಿನದ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಆರ್ಥಿಕತೆಯ ಮೂಲ ಆದಾಯ ಅಲ್ಲ, ಬಂಡವಾಳ ಆಗಬೇಕು. ೨೦೩೦ರಲ್ಲಿ ನಾವು ಮೂರನೇ ಅತಿದೊಡ್ಡ ಆರ್ಥಿಕತೆಯಾಗಿ ಹೊರಹೊಮ್ಮುವ ನಿರೀಕ್ಷೆಯಲ್ಲಿದ್ದೇವೆ. ಅದಕ್ಕೆ ಪೂರಕವಾಗಿ ಯುವಜನತೆಯ ಕೌಶಲಾಭಿವೃದ್ಧಿಯಾಗುವಂತೆ ರಾಷ್ಟ್ರೀಯ ಶಿಕ್ಷಣ ನೀತಿಯನ್ನೂ ಜಾರಿಗೊಳಿಸಲಾಗಿದೆ ಎಂದರು. ನಾವಿಂದು ಅಮೃತಕಾಲದಲ್ಲಿ ಇದ್ದೇವೆ. ೨೦೪೭ಕ್ಕೆ ದೇಶಕ್ಕೆ ಸ್ವಾತಂತ್ರ್ಯ ಲಭಿಸಿ ಸಿಕ್ಕಿ ೧೦೦ ವರ್ಷ ಪೂರ್ಣಗೊಳ್ಳುತ್ತದೆ. ಆ ಹೊತ್ತಿಗೆ ವಿಕಸಿತ ಭಾರತವಾಗುವ ಮಹತ್ವಾಕಾಂಕ್ಷೆಯ ಗುರಿ ಹೊಂದಲಾಗಿದೆ ಎಂದರು.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಸ್ಥಿರಾಸ್ತಿಗಳ ನೋಂದಣಿಯನ್ನು ಇ-ಆಸ್ತಿ ತಂತ್ರಾಂಶದಿಂದ ಮಾಹಿತಿ ಪಡೆದು ನೋಂದಾಯಿಸಬೇಕೆಂದು ಜಿಲ್ಲಾಧಿಕಾರಿ ಡಾ. ಎನ್ ಶಿವಶಂಕರ್ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯ ಎಲ್ಲಾ ಉಪನೋಂದಣಿ ಕಛೇರಿಗಳಲ್ಲಿ ನಗರ ಸ್ಥಳಿಯ ಸಂಸ್ಥೆಗಳ ಆಸ್ತಿಯನ್ನು ನೋಂದಾಯಿಸಲು ಆಸ್ತಿಯ ಮಾಹಿತಿಯನ್ನು ಕಡ್ಡಾಯವಾಗಿ ಇ-ಆಸ್ತಿ ತಂತ್ರಾಂಶದಿಂದಲೇ ಪಡೆಯಬೇಕಿದೆ ಎಂದರು. ಇ-ಆಸ್ತಿ ತಂತ್ರಾಂಶದಿಂದಾಗಿ ಸ್ವತ್ತುಗಳ ನೋಂದಣಿ ವೇಳೆ ಸಾರ್ವಜನಿಕರು ಮೋಸ ಹೋಗುವುದನ್ನು ತಡೆಯುವುದು. ಸ್ವತ್ತಿನ ಸ್ವರೂಪ ಮತ್ತು ನೈಜ ಮಾಲೀಕರನ್ನು ಗುರುತಿಸಲು ಸಾಧ್ಯವಾಗಲಿದ್ದು, ಸ್ವತ್ತುಗಳ ಖರೀದಿದಾರರಿಗೆ ಸ್ವತ್ತಿನ ನೈಜ ಮಾಲೀಕರನ್ನು ಗುರುತಿಸುವುದು. ಭವಿಷ್ಯದಲ್ಲಿ ಉಂಟಾಗಬಹುದಾದ ವ್ಯಾಜ್ಯ, ಕಾನೂನು ತೊಂದರೆಗಳನ್ನು ತಪ್ಪಿಸಬಹುದಾಗಿದೆ. ಸಾರ್ವಜನಿಕರು ಇ-ಆಸ್ತಿ ಸಂಯೋಜನೆಯ ಸದುಪಯೋಗವನ್ನು ಪಡೆದುಕೊಳ್ಳುವಂತೆ ಎಂದು ಜಿಲ್ಲಾಧಿಕಾರಿ ಮನವಿ ಮಾಡಿದ್ದಾರೆ.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಬರುವ ಭಾನುವಾರ ೧೧ ಗಂಟೆಗೆ ದೇಶವಾಸಿಗಳನ್ನುದ್ದೇಶಿಸಿ ತಮ್ಮ ಅನಿಸಿಕೆ ಹಾಗೂ ವಿಚಾರಧಾರೆಗಳನ್ನು ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಹಂಚಿಕೊಳ್ಳಲಿದ್ದಾರೆ. ಇದು ಮಾಸಿಕ ರೇಡಿಯೊ ಕಾರ್ಯಕ್ರಮದ ೧೧೪ನೇ ಸಂಚಿಕೆ ಇದಾಗಿದ್ದು, ಆಕಾಶವಾಣಿ ಹಾಗೂ ದೂರದರ್ಶನದ ಎಲ್ಲ ವಾಹಿನಿಗಳು ಹಾಗೂ ಜಾಲತಾಣಗಳಲ್ಲಿ ಭಿತ್ತರಗೊಳ್ಳಲಿದೆ. ೩ನೇ ಅವಧಿಗೆ ಪ್ರಧಾನಿಯಾದ ನಂತರ ಪ್ರಧಾನಿ ನರೇಂದ್ರ ಮೋದಿ ೪ನೇ ಮನದ ಮಾತು ಇದಾಗಲಿದೆ.

<><*<><>*><>

ನೈರುತ್ಯ ಮುಂಗಾರು ಒಳನಾಡಿನಲ್ಲಿ ದುರ್ಬಲಗೊಂಡಿತ್ತು. ರಾಜ್ಯದ ಅನೇಕ ಕಡೆ ಮಳೆಯಾಗಿದೆ. ಗೋಕರ್ಣ, ಕ್ಯಾಸಲ್‌ರಾಕ್, ಹುಮ್ನಾಬಾದ್‌ನಲ್ಲಿ ೪ ಸೆಂಟಿಮೀಟರ್, ಸುಳ್ಯ, ಮಾಣಿ, ಅಂಕೋಲಾ, ಕಾರವಾರ, ಗೇರುಗೊಪ್ಪ, ಪುತ್ತೂರಿನಲ್ಲಿ ೩ ಸೆಂಟಿಮೀಟರ್ ಕದ್ರಾ, ಪಣಂಬೂರು, ಕಾರ್ಕಳ, ಸಿದ್ದಾಪುರ, ಮುಲ್ಕಿ, ಭಾಲ್ಕಿಯಲ್ಲಿ ತಲಾ ೨ ಸೆಂಟಿಮೀಟರ್ ಮಳೆಯಾಗಿದೆ. ಮುನ್ಸೂಚನೆಯಂತೆ ಒಂದು ವಾರ ರಾಜ್ಯದ ಹಲವೆಡೆ ಸಾಧಾರಣಾದಿಂದ ಹಗುರದಿಂದ ಮಳೆಯಾಗುವ ಸಂಭವವಿದೆ. ಬೆಂಗಳೂರು ಸುತ್ತು ಮುತ್ತ ಸಾಮಾನ್ಯ ಮೋಡಕವಿದ ವಾತಾವರಣ. ಗರಿಷ್ಠ ೨೯, ಕನಿಷ್ಠ ೨೦ ಡಿಗ್ರಿ ಸೆಲ್ಸಿಯಸ್ ತಾಪಾಮಾನ ಸಂಭವವಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>